# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1564 |
| 2 | ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶಿತ ಹೊಂದಿದವರು) |
| 3 | ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| 4 | ಉತ್ತರಿಸಬೇಕಾದ ದಿನಾಂಕ | : | 24.09.2021 |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 2 ವರ್ಷಗಳಿಂದ ಕರೋನ ವೈರಾಣು ರೋಗದ ಬಾಧೆ ಮತ್ತು ಪ್ರಕೃತಿ ವೈಫಲ್ಯದ ಹಿನ್ನೆಲೆಯಲ್ಲಿ ಸಂಕಷ್ಟ ಅನುಭವಿಸುತ್ತಿರುವ ರಾಜ್ಯದ ದ್ರಾಕ್ಷಿ ಬೆಳೆಯುವ ರೈತರಿಗೆ ಬೆಳೆ ನಾಶವಾಗಿ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು)</td><td>ಸರ್ಕಾರದ ಗಮನಕ್ಕೆ ಬಂದಿದೆ.<br><br>ರಾಜ್ಯದಲ್ಲಿ ಕರೋನಾ ವೈರಾಣು ರೋಗದ ಬಾಧೆಯಿಂದ ಸಂ ಅನುಭವಿಸಿರುವ ದ್ರಾಕ್ಷಿ ಬೆಳೆದಿರುವ ರೈತರಿಗೆ ಈ ಕೆಳಕಂಡಂತೆ ಪರಿ ನೀಡಲಾಗಿರುತ್ತದೆ.<br><br><table><tr><th>ಕ್ರ. ಸಂ</th><th>ವರ್ಷ</th><th>ಫಲಾನುಭವಿಗಳ ಸಂಖ್ಯೆ</th><th>ವಿಸ್ತೀರ್ಣ (ಹೆ)</th><th>ಮೊತ್ತ (ರೂ.ಕೋಟಿಗಳಲ</th></tr><tr><td>1.</td><td>2020-21</td><td>3411</td><td>1948.40</td><td>2.9226</td></tr><tr><td>2.</td><td>2021-22</td><td>3428</td><td>2118.00</td><td>2.1180</td></tr></table><br>2. ಪ್ರಕೃತಿ ವೈಫಲ್ಯದಿಂದ ರಾಜ್ಯದಲ್ಲಿ 2020-21 ನೇ ಸಾಲಿನಲ್ಲಿ 5264.2 ಪ್ರದೇಶದಲ್ಲಿ ಹಾನಿಯಾಗಿದ್ದು ಕಂದಾಯ ಇಲಾಖೆ ವತಿಯಿಂದ ಪರಿಹಾರ ಪಾವತಿಸಲಾಗಿದೆ. 2021-22 ನೇ ಸಾಲಿನಲ್ಲಿ 144 ಹೆ. ಪ್ರದೇಶದಲ್ಲಿ ದ್ರಾಕ್ಷಿ ಹಾನಿಯಾಗಿದ್ದು ಕಂದಾಯ ಇಲಾಖೆವತಿಯಿಂದ ಕೇಂದ್ರ ಸರ್ಕಾರಕ್ಕೆ ಮೆಮೊರಾಂ ಸಲ್ಲಿಸಲಾಗಿರುತ್ತದೆ.</td></tr>
<tr><td>ಆ)</td><td>ಸದರಿ ದ್ರಾಕ್ಷಿ ಬೆಳೆಯುವ ರೈತರ ಸಂಕಷ್ಟಕ್ಕೆ ಸರ್ಕಾರದಿಂದ ಯಾವುದಾದರೂ ಬೆಳೆ ಹಾನಿ ಸಮೀಕ್ಷೆಯನ್ನು ಮಾಡಿಸಲಾಗಿದೆಯೇ; (ವಿವರ ನೀಡುವುದು) ಪರಿಹಾರ ನೀಡುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)</td><td>ದ್ರಾಕ್ಷಿ ಬೆಳೆಯುವ ರೈತರಿಗೆ ಅತಿವೃಷ್ಟಿ ಮತ್ತು ಪ್ರವಾಹದಿಂದಾಗಿ ಸಂಕಷ್ಟಕ್ಕೆ 2021-22 ನೇ ಸಾಲಿನ ಅಂದಾಜು ಬೆಳೆಹಾನಿ ಸಮೀಕ್ಷೆ ಮಾಡಿಸಲಾ ಪ್ರಮುಖವಾಗಿ ಬೆಳಗಾವಿ ಜಿಲ್ಲೆಯಲ್ಲಿ 130 ಹೆ ಮತ್ತು ಬಾಗಲಕೆ ಜಿಲ್ಲೆಯಲ್ಲಿ 14 ಹೆ ಪ್ರದೇಶದಲ್ಲಿ ದ್ರಾಕ್ಷಿ ಬೆಳೆ ಹಾನಿಯಾಗಿರುತ್ತದೆ. ಪರಿ ನೀಡುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದ್ದು ಕಂದಾಯ ಇಲಾ ವತಿಯಿಂದ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಗಿರುತ್ತದೆ.</td></tr>
<tr><td>ಇ)</td><td>ತೋಟಗಾರಿಕೆ ಬೆಳೆಗಳಿಗೆ ಸಮರ್ಪಕವಾದ ಸರ್ಕಾರಿ/ಸಹಕಾರಿ/ಖಾಸಗಿ ಮಾರುಕಟ್ಟೆ ವ್ಯವಸ್ಥೆಯಿಲ್ಲದೇ ಬೆಳೆಗಾರರು ಸಂಕಷ್ಟ ಅನುಭವಿಸುತ್ತಿರುವ ಕುರಿತು ಸರ್ಕಾರದ ಕ್ರಮವೇನು? (ವಿವರ ನೀಡುವುದು)</td><td>ತೋಟಗಾರಿಕೆ ಬೆಳೆಗಳಿಗೆ ಸಮರ್ಪಕವಾದ ಸರ್ಕಾರಿ/ಸಹಕಾರಿ/ಖಾಸಗಿ ವಲಯ ಮಾರುಕಟ್ಟೆ ವ್ಯವಸ್ಥೆ ಕುರಿತು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>೧.ರಾಜ್ಯದಲ್ಲಿ ರೈತರು ಬೆಳೆದ ತೋಟಗಾರಿಕೆ ಬೆಳೆಗಳನ್ನು ಸಮರ್ಪಕವಾಗಿ ಮಾ ಮಾಡಲು ತೋಟಗಾರಿಕೆ ಇಲಾಖೆ ವತಿಯಿಂದ ಈ ಕೆಳಕಂಡ ವಿವಿಧ ವ್ಯವಸ್ಥೆಗ ಸ್ಥಾಪಿಸಲಾಗಿರುತ್ತದೆ.<br>ಅ) ಕರ್ನಾಟಕ ರಾಜ್ಯ ಸಹಕಾರಿ ತೋಟಗಾರಿಕಾ ಮಾರಾಟ ಮಹಾ ಮಂಡಳ (ನಿ) (ಕೆ.ಹೆಚ್.ಎಫ್)</td></tr>
</table>

1. ರಾಜ್ಯದಲ್ಲಿ ಒಟ್ಟು 22 ಜಿಲ್ಲೆಗಳಲ್ಲಿ ಹಾಪ್ ಕಾಮ್ಸ್ ಮೂಲಕ ರೈತ ಸದಸ್ಯರಿಂದ ತೋಟಗಾರಿಕೆ ಉತ್ಪನ್ನಗಳನ್ನು ಸಂಗ್ರಹಿಸಿ ಮಾರಾಟ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

2. ರಾಜ್ಯ ಮಟ್ಟದಲ್ಲಿ ಕೆ.ಹೆಚ್.ಎಫ್ ಅಧೀನದಲ್ಲಿ ಎಲ್ಲಾ 22 ಜಿಲ್ಲಾ ಹಾಪ್ ಕಾಮ್ಸ್ ಗಳು ಕಾರ್ಯ ನಿರ್ವಹಿಸುತ್ತಿರುತ್ತವೆ ಹಾಗು ಕೆ.ಹೆಚ್.ಎಫ್ ಮೂಲಕ ಜಿಲ್ಲಾ ಹಾಪ್ ಕಾಮ್ಸ್ ಗಳಲ್ಲಿ ಮೂಲಭೂತ ಸೌಕರ್ಯಗಳ ನಿರ್ಮಾಣ ಹಾಗು ಮಾರಾಟ ವ್ಯವಸ್ಥೆ ಅಭಿವೃದ್ಧಿ ಪಡಿಸಲಾಗುತ್ತಿರುತ್ತದೆ.

ಆ) ನಿಗಮ ಮತ್ತು ಮಂಡಳಿ ಸ್ಥಾಪನೆ

ಪ್ರಮುಖ ತೋಟಗಾರಿಕೆ ಬೆಳೆಗಳ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರಾಟ ವ್ಯವಸ್ಥೆಯ ಸರ್ವತೋಮುಖ ಅಭಿವೃದ್ಧಿಗಾಗಿ ಈ ಕೆಳಕಂಡ ನಿಗಮ ಮತ್ತು ಮಂಡಳಿಗಳನ್ನು ಸ್ಥಾಪಿಸಲಾಗಿರುತ್ತದೆ.

a) ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತ
b) ಕರ್ನಾಟಕ ರಾಜ್ಯ ದ್ರಾಕ್ಷಾರಸ ಮಂಡಳಿ
c) ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ
d) ಕರ್ನಾಟಕ ರಾಜ್ಯ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ

- ಸದರಿ ನಿಗಮ ಮತ್ತು ಮಂಡಳಿಗಳ ಮೂಲಕ ಅಭಿವೃದ್ಧಿ ಹಾಗು ರಫ್ತು ಉತ್ತೇಜಿತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸ ಲಾಗುತ್ತಿದೆ.
- ರೈತ ಉತ್ಪಾದಕ ಸಂಸ್ಥೆಗಳ ಮೂಲಕ ತೋಟಗಾರಿಕೆ ಉತ್ಪನ್ನಗಳಿಗೆ ಮಾರಾಟ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ.

ಇ) ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಮಾರುಕಟ್ಟೆ ಮೂಲಭೂತ ಸೌಕರ್ಯ ನಿರ್ಮಾಣ ಮಾಡಲು ಚಿಲ್ಲರೆ ಮಾರುಕಟ್ಟೆ, ಸಗಟು ಮಾರುಕಟ್ಟೆ ಮತ್ತು ಗ್ರಾಮೀಣ ಮಾರುಕಟ್ಟೆ ನಿರ್ಮಾಣ ಕಾರ್ಯಕ್ರಮಗಳಿಗೆ ಸಹಾಯಧನ ಕಲ್ಪಿಸಲಾಗುತ್ತಿದೆ.

ಈ) ಮಾರುಕಟ್ಟೆ ಮಧ್ಯಪ್ರವೇಶ ಯೋಜನೆ:

ತೋಟಗಾರಿಕೆ ಉತ್ಪನ್ನಗಳ ಮಾರುಕಟ್ಟೆ ಧಾರಣೆ ಕುಸಿತಗೊಂಡಾಗ ನಿಯಮಾನುಸಾರ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ.

ಉ) ಶೀತಲಗೃಹಗಳ ನಿರ್ಮಾಣ: ರೈತರ ಅನುಕೂಲಕ್ಕಾಗಿ ರಾಜ್ಯದಲ್ಲಿ 159 ಸಂಖ್ಯೆಯ 5.37ಲಕ್ಷಮೆ.ಟನ್ ಸಾಮರ್ಥ್ಯ ಹೊಂದಿರುವ ಶೀತಲ ಗೃಹಗಳನ್ನು ನಿರ್ಮಿಸಲಾಗಿರುತ್ತದೆ.

ಊ) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮತ್ತು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಂಸ್ಕರಣೆ ಮತ್ತು ಮೌಲ್ಯವರ್ಧನೆಘಟಕಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ.

ಋ) ರಾಷ್ಟ್ರೀಯ ಇ ಮಾರುಕಟ್ಟೆ ಸೇವೆ: ಆಯ್ದ ತೋಟಗಾರಿಕೆ ಬೆಳೆಗಳಿಗೆ ರಾಷ್ಟ್ರೀಯ ಇ ಮಾರುಕಟ್ಟೆ ಸೇವೆಯ ಮೂಲಕ ಆನ್ ಲೈನ್ ಮಾರುಕಟ್ಟೆ ವವಯವಸ್ಥೆ ಕಲ್ಪಿಸಲಾಗಿದೆ.

No.HORTI 448 HGM 2021

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.